# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

ಬುಧವಾರ, ದಿನಾಂಕ:18ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವಗಳು

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.**

1. ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2026
2. ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2026

## 4. ವರದಿಯನ್ನೊಪ್ಪಿಸುವುದು

**ಶ್ರೀ ಡಿ. ಸುಧಾಕರ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು) ಅವರು** ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ (ಸಂಪುಟ-1 ಮತ್ತು ಸಂಪುಟ-2) ವರದಿಯನ್ನು ಮಂಡಿಸುವುದು.

## 5. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಪೋಲೀಸು (ತಿದ್ದುಪಡಿ) ವಿಧೇಯಕ, 2026
**ಡಾ: ಜಿ. ಪರಮೇಶ್ವರ (ಮಾನ್ಯ ಗೃಹ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ "ಕರ್ನಾಟಕ ಪೋಲೀಸು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2026
**ಶ್ರೀ ಬಿ.ಎಸ್. ಸುರೇಶ (ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ "ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 6. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ಹಾಗೂ ಸುತ್ತಮುತ್ತಲಿನ ತಾಲ್ಲೂಕುಗಳ ರೈತರುಗಳು ಬೆಳೆ ಸಮೀಕ್ಷೆ ಅರ್ಜಿಗಳಲ್ಲಿ ಜೋಳ ಬೆಳೆದಿರುವುದಾಗಿ ತಪ್ಪು ಮಾಹಿತಿಯನ್ನು ನಮೂದಿಸಿ ಜೋಳ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟಕ್ಕೆ ಹೆಸರುಗಳನ್ನು ನೊಂದಾಯಿಸುತ್ತಿದ್ದು, ಇದರಿಂದಾಗಿ ನೈಜ ಜೋಳ ಬೆಳೆಯುವ ರೈತರು ಸಂಕಷ್ಟಕ್ಕೀಡಾಗಿರುವ ಬಗ್ಗೆ **ಮಾನ್ಯ ಕಂದಾಯ** ಸಚಿವರ ಗಮನ ಸೆಳೆಯುವುದು.

2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ದುರಸ್ಥಿಗೊಂಡು ನೀರು ಪೋಲಾಗುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

3. **ಶ್ರೀ ಸಿ.ಟಿ. ರವಿ** ಅವರು ವಿವಿಧ ಇಲಾಖೆಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಬಾಕಿಯಿರುವ ಹಣವನ್ನು ಬಿಡುಗಡೆ ಮಾಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

## 7. ನಿಯಮ ೩೩೦ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಸಿ.ಟಿ. ರವಿ, ಡಾ: ತಳವಾರ್ ಸಾಬಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ/ಮಂಡಳಿಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ, ರಾಜ್ಯ ಸರ್ಕಾರವು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

2. **ಡಾ: ಕೆ. ಗೋವಿಂದರಾಜ್** ಅವರು ಬೆಂಗಳೂರಿನ ಸುತ್ತಮುತ್ತಲಿನ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ ಬಿ.ಬಿ.ಎಂ.ಪಿ ಮತ್ತು ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದರೂ ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಗಳು)**

## ೮. ವಿತ್ತೀಯ ಕಾರ್ಯಕಲಾಪ

೨೦೨೬-೨೭ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**(ಏಳನೇ ದಿನ)**

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council/council.htm**